1ನೇ **ಹೆಚ್ಚುವರಿ ವ್ಯವಹಾರ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಸಾಗರ**

**ಸಿಸಿ ನಂಬರು 270-2025**

**ಸಿ.ಡಬ್ಲು -21, ಪಿ.ಡಬ್ಲು-13**

**ಸಾಕ್ಷಿದಾರರ ಹೆಸರು** : ಸಿದ್ದರಾಮಪ್ಪ ಹೆಚ್.
ತಂದೆಯ **ಹೆಸರು** : ಹನುಮಂತಪ್ಪ
**ವಯಸ್ಸು** : 56 ವರ್ಷ
**ಉದ್ಯೋಗ** : ಪೊಲೀಸ್ ಉಪ ನಿರೀಕ್ಷಕರು, ಡಿ.ಸಿ.ಆರ್.ಇ., ಶಿವಮೊಗ್ಗ.
**ವಾಸ** : ಶಿವಮೊಗ್ಗ

**ಪ್ರಮಾಣೀಕರಿಸಿದ ದಿನಾಂಕ :06.07.2026.**

**ಮುಖ್ಯ ವಿಚಾರಣೆ :** ಸ.ಸ.ಅ. ರವರಿಂದ

1. ನಾನು 2013 ರಿಂದ 2025 ರವರೆಗೆ ಸಾಗರದ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಎ.ಎಸ್.ಐ. ಮತ್ತು ಪಿ.ಎಸ್.ಐ. ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ದಿ:07.07.2023 ರಂದು ನಾನು ಠಾಣಾ ಪ್ರಭಾರದಲ್ಲಿದ್ದಾಗ ಚಾಸ 1 ರವರು ನೀಡಿದ ಲಿಖಿತ ದೂರನ್ನು ಪಡೆದು ಠಾಣಾ ಗುನ್ನ ಸಂಖ್ಯೆ 232/2023 ರಂತೆ ಪ್ರಕರಣವನ್ನು ದಾಖಲಿಸಿಕೊಂಡು ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ಅದೇ ದಿನ ಚಾಸ 1 ರವರು ತೋರಿಸಿದ ಸ್ಥಳದಲ್ಲಿ ಚಾಸ 7 ಮತ್ತು 8 ರವರ ಸಮಕ್ಷಮ ಸ್ಥಳ ಪಂಚನಾಮೆಯ ಕ್ರಮವನ್ನು ಮಧ್ಯಾಹ್ನ 03.30 ರಿಂದ 4.30 ಗಂಟೆಯವರೆಗೆ ಜರುಗಿಸಿರುತ್ತೇನೆ. ಪಂಚನಾಮೆಯ ಕಾಲಕ್ಕೆ ಪೋಟೋ ತೆಗೆದಿರುತ್ತೇನೆ ಮತ್ತು ಕಚ್ಚಾ ನಕಾಶೆಯನ್ನು ತಯಾರಿಸಿರುತ್ತೇನೆ. ಅದೇ ದಿನ ಚಾಸ 2 ರಿಂದ 6 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ.

3. ದಿ:25.12.2023 ರಂದು ಕೃತ್ಯಕ್ಕೆ ಬಳಸಿದ ಕೆ ಎ 41 ಬಿ 0297 ನೇದ್ದರ ಓಮಿನಿ ಕಾರನ್ನು ಚಾಸ 7 ಮತ್ತು 8 ರವರ ಸಮಕ್ಷಮ ಅಮಾನತ್ತುಪಡಿಸಿಕೊಂಡು ಅಮಾನತ್ತು ಪಂಚನಾಮೆಯ ಕ್ರಮವನ್ನು ಜರುಗಿಸಿರುತ್ತೇನೆ. ಜಪ್ತುಪಡಿಸಿಕೊಂಡ ವಾಹನಕ್ಕೆ ಸಂಬಂಧಿಸಿದಂತೆ ಮಾನ್ಯ ನ್ಯಾಯಾಲಯಕ್ಕೆ ಪಿ.ಎಫ್. ಅನ್ನು ನಿವೇದಿಸಿಕೊಂಡಿರುತ್ತೇನೆ.

4. ದಿ:21.01.2024 ರಂದು ಚಾಸ 1 ರಿಂದ 6 ರವರ ಮರುಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ.

5. ದಿ:17.08.2024 ರಂದು ಚಾಸ 20 ರವರಿಂದ ಸಿ ಆರ್ ಸಂಖ್ಯೆ 259/2023 ಪ್ರಕರಣದಲ್ಲಿ ಈ ಪ್ರಕರಣಕ್ಕೆ ಸಂಬಂಧಿಸಿದ ನಕಲು ಪ್ರತಿಗಳನ್ನು ಹಾಜರುಪಡಿಸಿದ್ದು, ಅದನ್ನು ಪ್ರಕರಣದ ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ.

ಪ್ರಕರಣದ ಕಡತವನ್ನು ಪರಿಶೀಲಿಸಿದಾಗ ಈ ಪ್ರಕರಣದ ಇನ್ನೊಬ್ಬ ಆರೋಪಿ ಧನುಷ್ ಕಾನೂನು ಸಂಘರ್ಷಕ್ಕೆ ಒಳಗಾದ ಬಾಲಕ ಎಂದು ತಿಳಿದು ಬಂತು. ನಂತರ ನಾನು ಬಾಲ ನ್ಯಾಯ ಮಂಡಳಿಯ ಮುಂದೆ ಕಾನೂನು ಸಂಘರ್ಷಕ್ಕೆ ಒಳಗಾದ ಬಾಲಕನಿಗೆ ಸಂಬಂಧಪಟ್ಟ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿದೆ.

6. ದಿ:17.08.2024 ರಂದು ಈ ಪ್ರಕರಣದ ತನಿಖೆ ಪೂರ್ಣಗೊಂಡಿದ್ದು, ಸೂಕ್ತ ಸಾಕ್ಷಾಧಾರಗಳು ದೊರೆತಿದ್ದರಿಂದ ಆರೋಪಿಯ ವಿರುದ್ಧ ಮಾನ್ಯ ನ್ಯಾಯಾಲಯಕ್ಕೆ ಅಂತಿಮ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

7. ಸಾಕ್ಷಿಯು ನಿಪಿ 1 ರ ಮೇಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ 1(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ 2 ರ ಮೇಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ 2(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ 3 ರಿಂದ 7 ರಲ್ಲಿ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿಯು ಪ್ರಥಮ ವರ್ತಮಾನ ವರದಿಯನ್ನು ಮತ್ತು ಅದರ ಮೇಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಪ್ರಥಮ ವರ್ತಮಾನ ವರದಿಯನ್ನು ನಿಪಿ 33 ಎಂದು, ಸಾಕ್ಷಿಯ ಸಹಿಯನ್ನು ನಿಪಿ 33(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಪಂಚರಿಗೆ ನೀಡಿದ ನೋಟೀಸ್ ಮತ್ತು ಅದರ ಮೇಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಪಂಚರಿಗೆ ನೀಡಿದ ನೋಟೀಸ್ ಅನ್ನು ನಿಪಿ 34 ಎಂದು, ಸಾಕ್ಷಿಯ ಸಹಿಯನ್ನು ನಿಪಿ 34(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಕಚ್ಚಾ ನಕಾಶೆ ಮತ್ತು ಅದರ ಮೇಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಕಚ್ಚಾ ನಕಾಶೆಯನ್ನು ನಿಪಿ 35 ಎಂದು, ಸಾಕ್ಷಿಯ ಸಹಿಯನ್ನು ನಿಪಿ 35(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಸ್ವತ್ತುಗಳ ಪಟ್ಟಿ ಮತ್ತು ಅದರ ಮೇಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸ್ವತ್ತುಗಳ ಪಟ್ಟಿಯನ್ನು ನಿಪಿ 36 ಎಂದು, ಸಾಕ್ಷಿಯ ಸಹಿಯನ್ನು ನಿಪಿ 36(ಎ) ಎಂದು ಗುರುತಿಸಲಾಯಿತು. ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ. (ಆರೋಪಿ ಪರ ವಕೀಲರು ಆರೋಪಿಯ ಗುರುತಿಸುವಿಕೆಗೆ ಯಾವುದೇ ತಕರಾರು ಇಲ್ಲವೆಂದು ನಿವೇದಿಸಿಕೊಂಡಿರುತ್ತಾರೆ.)

<u>ಪಾಟೀ ಸವಾಲು:- ಆರೋಪಿ ಪರ ಶ್ರೀ ಕೆ.ವಿ.ಪಿ. ವಕೀಲರಿಂದ</u>

1. ನಾನು ಘಟನಾ ಸ್ಥಳಕ್ಕೆ ದೂರು ದಾಖಲಾದ ದಿನವೇ ಹೋಗಿರುತ್ತೇನೆ.

ಘಟನಾ ಸ್ಥಳದಲ್ಲಿ ಮನೆಯ ಬೀಗವನ್ನು ಮುರಿದ ಯಾವುದೇ ಗುರುತುಗಳು ಕಂಡು ಬಂದಿರುವುದಿಲ್ಲ. ಮನೆಯಲ್ಲಿ ಏನೂ ಕಳ್ಳತನವಾಗಿರಲಿಲ್ಲ. ಆರೋಪಿಯನ್ನು ಬೇರೆ ಪ್ರಕರಣದಲ್ಲಿ ಚಾಸ 20 ರವರು ಹಿಡಿದಿದ್ದರು. ನಾವು ಆರೋಪಿಯನ್ನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಹಿಡಿದಿರುವುದಿಲ್ಲ. ಈ ಪ್ರಕರಣದ ಆರೋಪಿ ಸುರೇಶ್ ಆಚಾರಿ ಎಂಬುವವರ ಮನೆಯಲ್ಲಿ ಕಳ್ಳತನ ಮಾಡಿದ ಎಂದು ಯಾವುದೇ ದೂರು ಇರಲಿಲ್ಲ. ನಾನು ಸೂಕ್ತ ನಿಟ್ಟಿನಲ್ಲಿ ತನಿಖೆಯನ್ನು ನಡೆಸದೇ ಆರೋಪಿಯ ವಿರುದ್ಧ ಸುಳ್ಳು ಅಂತಿಮ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ನನ್ನ ಸಾಕ್ಷ್ಯ ಮುಖ್ಯ ವಿಚಾರಣೆಯಲ್ಲಿ ಹೇಳಿರುವ ವಿಷಯಗಳು ಸುಳ್ಳಿನಿಂದ ಕೂಡಿರುತ್ತವೆ ಎಂದರೆ ಸರಿಯಲ್ಲ.

<u>ಮರು ವಿಚಾರಣೆಃ ಇಲ್ಲ</u>

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ರೀತ್ಯಾ ಗಣಕೀಕರಿಸಲಾಯ್ತು)**
**ಓದಿ ಹೇಳಿ ಕೇಳಿ ಸರಿ ಇದೆ**

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಸಾಗರ.